**2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಕೆ.ಜಿ.ಎಫ್,**

**ಸಿ.ಸಿ. ಸಂಖ್ಯೆ: 2603/2023**

**ಸಿ.ಡಬ್ಲ್ಯೂ: 7 ಪಿ.ಡಬ್ಲ್ಯೂ: 6**

**ಪ್ರಮಾಣೀಕರಿಸಿದ ದಿನಾಂಕ: 28-04-2026**

| | |
|---|---|
| ಹೆಸರು | ಸಾಮ್ಸನ್ |
| ತಂದೆಯ ಹೆಸರು | ಲೇಟ್ ಪೂಸ್ವಾಮಿ |
| ವಯಸ್ಸು | 36 ವರ್ಷ |
| ವೃತ್ತಿ | ಗಾರೆ ಕೆಲಸ |
| ವಾಸ | ಕರೆಜಿಎಫ್ |

**ಮುಖ್ಯ ವಿಚಾರಣೆ:- ಮಾನ್ಯ ಸ.ಸ.ಅ ರವರಿಂದ:-**

1. ಚಾಸಾ 10 ನನಗೆ ಗೊತ್ತಿಲ್ಲ. ನ್ಯಾಯಾಲಯದ ಮುಂದೆ ಇರುವ 1 ನೇ ಆರೋಪಿ ನನಗೆ ಗೊತ್ತಿಲ್ಲ.

2. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದು್ದ ಸದರಿ ದಾಖಲೆಯು ಅಮಾನತು ಪಂಚನಾಮೆ ಆಗಿದ್ದು ಅದನ್ನು ಈಗ ನಿಪಿ.12 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ಈಗ ನಿಪಿ.12 ಎ ಎಂದು ಗುರುತಿಸಲಾಯಿತು. ಸದರಿ ದಾಖಲೆಯ ಬಗ್ಗೆ ನನಗೆ ಗೊತ್ತಿಲ್ಲ. ಉಳಿದ ವಿಚಾರ ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಕಾಲಾವಕಾಶ ಕೋರಿರುತ್ತಾರೆ. ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ಅಮಾನತು ಪಂಚನಾಮೆಯ ಸಾಕ್ಷಿದಾರರಾಗಿದ್ದು ಸದರಿ ದಾಖಕೆಯ ಅಂಶಗಳಿಗೆ ವಿರುದ್ಧವಾಗಿ ಹೇಳುವ ಕಾರಣ ಅವರ ಮನವಿಯನ್ನು ಪರಿಗಣಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)**

**ಪಾಟೀ ಸವಾಲು:- ಮಾನ್ಯ ಸ.ಸ.ಅ ರವರಿಂದ:-**

3. ದಿ: 25.06.2023 ರಂದು ಪೋಲೀಸರು ನ್ಯೂ ಮಾಡೆಲ್ ಹೌಸ್ ಶಿವರಾಜ ನಗರದಲ್ಲಿರುವ 1 ನೇ ಆರೋಪಿಯ ಮನೆಯ ಬಳಿ ಮ 2.00 ಗಂಟೆ ಇಂದ 3.00 ಗಂಟೆಯವರೆಗೆ ನಿಪಿ12 ರಂತೆ ಅಮಾನತು ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಪೋಲೀಸರು ಎರಡು ಮರದ ಡೋರುಗಳನ್ನು ನನ್ನ ಸಮಕ್ಷಮ ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಾನು ಖುದ್ದು ಹಾಜರಿದ್ದು ನಿಪಿ12 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ನಿಪಿ12 ರ ಅಂಶಗಳ ಬಗ್ಗೆ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಗೊತ್ತಿಲ್ಲ ಎಂದು ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ: ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತಗೊಳಿಸಲಾಗಿದೆ).**

**ಓದಿ ಹೇಳಿ ಕೇಳಿ ಸರಿ ಇದೆ**

Sd/-

**C/c 2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕೆಜಿಎಫ್.**